ಆ) ನಗರದಲ್ಲಿ ಆಸ್ಫಾಟಿಂಗ್ ಮತ್ತು ಬಾಕ್ಸ್ ಚರಂಡಿ ಕಾಮಗಾರಿಯನ್ನು ಯಾವಾಗ ಕೈಗೆತ್ತಿಕೊಳ್ಳಲಾಗುವುದು.

1. ಡಾಂಬರೀಕರಣ ರಸ್ತೆ ಕಾಮಗಾರಿಗಳನ್ನು ಈಗಾಗಲೇ ಪ್ರಾರಂಭಿಸಲಾಗಿದೆ.

2. ಬಾಕ್ಸ್ ಟೈಪ್ ಚರಂಡಿ ಕಾಮಗಾರಿಗಳಿಗೆ ಟೆಂಡರ್ ಕರೆಯಲಾಗಿದ್ದು, ಟೆಂಡರ್ ಪ್ರಕ್ರಿಯೆ ನಂತರ ಸದರಿ ಕಾಮಗಾರಿಗಳನ್ನು ಪ್ರಾರಂಭಿಸಲಾಗುವುದು.

66 ಶ್ರೀ. ಮಹದೇವ ಪ್ರಸಾದ್.ಹೆಚ್.ಎಸ್.

ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳ ಮತ್ತು ಸಾರ್ವಜನಿಕ ಉದ್ಯಮಗಳ ಸಚಿವರು.

ಅ) ಗುಂಡ್ಲುಪೇಟೆ ಪಟ್ಟಣದ ಅಭಿವೃದ್ಧಿಗೆ ಐ.ಡಿ.ಎಸ್.ಎಂ.ಟಿ ಯೋಜನೆಯ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೆ:

ಈಗಾಗಲೇ ಐ.ಡಿ.ಎಸ್.ಎಂ.ಟಿ ಯೋಜನೆಯಡಿ ಗುಂಡ್ಲುಪೇಟೆ ಪಟ್ಟಣಗಳನ್ನು 1999–2000ನೇ ಸಾಲಿನಲ್ಲಿ ಆಯ್ಕೆ ಮಾಡಲಾಗಿದ್ದು, ಕಾಮಗಾರಿಗಳ ವಿವರಗಳು ಕೆಳಕಂಡಂತಿದೆ.

1. ವಾಣಿಜ್ಯ ಸಂಕೀರ್ಣ
2. ತರಕಾರಿ ಮಾರುಕಟ್ಟೆ
3. ರಸ್ತೆ ಅಭಿವೃದ್ಧಿ
4. ಬೀದಿ ದೀಪಗಳು
5. ಚರಂಡಿಗಳು
6. ಸಮುದಾಯ ಭವನ

ಹಾಗೂ ಐ.ಡಿ.ಎಸ್.ಎಂ.ಟಿ ಯೋಜನೆಯು 2005–06ನೇ ಸಾಲಿನಲ್ಲಿ ಮುಕ್ತಾಯಗೊಂಡಿರುತ್ತದೆ.

ಆ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಮೇನು?

– ಉದ್ಭವಿಸುವುದಿಲ್ಲ–